# Regional Bulletin In Kannada
# 07.09.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**07.09.2024** **18.40 hrs**

**<><*<><>*><>**

<u>ಮುಖ್ಯಾಂಶಗಳು</u>

**<><*<><>*><>**

**೧. ಮಹದಾಯಿ ಯೋಜನೆ ಬಗ್ಗೆ ಸರ್ವಪಕ್ಷ ಸಭೆ ಕುರಿತಂತೆ ಮುಖ್ಯಮಂತ್ರಿಗಳ ಜೊತೆ ಚರ್ಚೆ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

**೨. ಬಿಜೆಪಿಯಲ್ಲಿ ವಿಜಯೇಂದ್ರ ನಾಯಕತ್ವವನ್ನು ಹಿರಿಯ ನಾಯಕರು ಒಪ್ಪಿಕೊಂಡಿಲ್ಲ ಸಚಿವ ಎಂ ಬಿ ಪಾಟೀಲ್**

**೩. ನಾಡಿನೆಲ್ಲೆಡೆ ಗಣೇಶ ಚತುರ್ಥಿ ಸಂಭ್ರಮ ಮೈಸೂರು ಅರಮನೆ ಆವರಣದಲ್ಲಿ ಗಜಪಡೆಗೆ ವಿಶೇಷ ಪೂಜೆ**

**೪. ಚಿಕ್ಕಬಳ್ಳಾಪುರದಲ್ಲಿ ಬೃಹತ್ ಹೂವಿನ ಮಾರುಕಟ್ಟೆ ನಿರ್ಮಿಸಲು ೨೦ ಎಕರೆ ಭೂಮಿ ಮಂಜೂರು**

**<><*<><>*><>**

ಮಹದಾಯಿ ವಿವಾದ ಶೀಘ್ರವೇ ಬಗೆಹರಿಸುವಂತೆ ಕೇಂದ್ರ ಸರ್ಕಾರಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಮಾಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹದಾಯಿ ವಿವಾದ ಕುರಿತಂತೆ ಸರ್ವಪಕ್ಷ ಸಭೆ ಅಥವಾ ನಿಯೋಗದ ಸಭೆ ನಡೆಸುವುದರ ಬಗ್ಗೆ ಮುಖ್ಯಮಂತ್ರಿಯವರ ಜೊತೆ ಇನ್ನು ೧೫ ದಿನದೊಳಗೆ ಚರ್ಚಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಶೀಘ್ರವೇ ಎತ್ತಿನಹೊಳೆ ಯೋಜನೆಯಲ್ಲಿ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜನರ ನೀರಿನ ಬರ ನೀಗಿಸಲಾಗುವುದು ಎಂದು ತಿಳಿಸಿದ್ದಾರೆ. ತುಮಕೂರು,

ದೊಡ್ಡಬಳ್ಳಾಪುರ ಭಾಗದ ಸಮಸ್ಯೆಗಳ ಜೊತೆಗೆ ಅರಣ್ಯ ಭೂಮಿ ಸ್ವಾಧೀನ ಕುರಿತಂತೆ ಶೀಘ್ರವೇ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

**<><*<><>*><>**

ಬಿಜೆಪಿಯಲ್ಲಿ ವಿಜಯೇಂದ್ರ ನಾಯಕತ್ವವನ್ನು ಹಿರಿಯ ನಾಯಕರು ಇನ್ನೂ ಒಪ್ಪಿಕೊಂಡಿಲ್ಲ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಬಿಜೆಪಿಯಲ್ಲಿ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ, ಆರ್.ಅಶೋಕ, ಅಶ್ವಥ್‌ನಾರಾಯಣ್ ಸೇರಿದಂತೆ ಹಲವರಿಗೆ ಪಕ್ಷದ ನಾಯಕತ್ವದ ಬಗ್ಗೆ ಅಸಮಾಧಾನವಿದೆ ಎಂದು ಹೇಳಿದ್ದಾರೆ. ಮುಡಾ ಪ್ರಕರಣವನ್ನು ನ್ಯಾಯಾಲಯವೇ ಇತ್ಯರ್ಥಪಡಿಸಲಿದೆ ಎಂದು ತಿಳಿಸಿದ್ದಾರೆ. ಕೋವಿಡ್ ಸಂದರ್ಭದಲ್ಲಿ ಬಿಜೆಪಿ ಸರ್ಕಾರ ಸಾವಿರಾರು ಕೋಟಿ ರೂಪಾಯಿ ಹಣ ದುರ್ಬಳಕೆ ಮಾಡಿಕೊಂಡಿದೆ ಎಂದು ಆರೋಪಿಸಿದ್ದಾರೆ.

**<><*<><>*><>**

ನಾಡಿನೆಲ್ಲೆಡೆ ಇಂದು ಗಣೇಶ ಹಬ್ಬದ ಸಂಭ್ರಮ ಮನೆಮಾಡಿದೆ. ಹುಬ್ಬಳ್ಳಿಯ ಈದ್ಗಾ ರಾಣಿ ಚನ್ನಮ್ಮ ಮೈದಾನದ ಗಣಪತಿ ಪ್ರತಿಷ್ಠಾಪನೆ, ಸಮಾರಂಭ ಅತೀ ವಿಜೃಂಭಣೆಯಿಂದ ನಡೆಯಿತು. ಅದ್ದೂರಿ ಮೆರವಣಿಗೆ ಮೂಲಕ ರಾಮನ ಅವತಾರದ ವಿಘ್ನೇಶ್ವರ ಪ್ರತಿಷ್ಠಾಪನೆಗೊಂಡಿದೆ. ಈ ಮೆರವಣಿಗೆಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ಶಾಸಕ ಮಹೇಶ್ ಟೆಂಗಿನಕಾಯಿ ಸೇರಿದಂತೆ ಗಣ್ಯರು ಭಾಗಿಯಾಗಿ ಮಹಾಗಣಪತಿ ವಿಶೇಷ ಪೂಜೆ ಸಲ್ಲಿಸಿದರು. ಹುಬ್ಬಳ್ಳಿ - ಧಾರವಾಡ ಅವಳಿನಗರದಲ್ಲಿ ಯಾವುದೇ ರೀತಿಯ ಗೊಂದಲ ಉಂಟಾಗದಂತೆ ಶಾಂತಿ - ಸುವ್ಯವಸ್ಥೆಗೆ ಧಕ್ಕೆ ಬರದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್. ಶಶಿಕುಮಾರ್ ತಿಳಿಸಿದ್ದಾರೆ. ಹುಬ್ಬಳ್ಳಿಯ ರಾಣಿ ಚನ್ನಮ್ಮ ಮೈದಾನಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ಒಂದು ಸಾವಿರ ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಪ್ರತಿಷ್ಠಾಪನೆಗೆ ಪರವಾನಿಗೆ ನೀಡಲಾಗಿದೆ ಎಂದು ಹೇಳಿದ್ದಾರೆ.

ಧ್ವನಿ: ಶಶಿಕುಮಾರ್, ಪೊಲೀಸ್ ಕಮಿಷನರ್

ಪಾಲಿಕೆ ವತಿಯಿಂದ, ಈದ್ಗಾ ಮೈದಾನದಲ್ಲಿ ಗಣೇಶೋತ್ಸವ ಆಚರಣೆಗೆ ಮೂರು ದಿನಗಳ ಕಾಲ ಅನುಮತಿ ಕೊಡಲಾಗಿದೆ. ಹೆಚ್ಚಿನ ಪೊಲೀಸ್ ಭದ್ರತೆ ನಿಯೋಜನೆ ಮಾಡಲಾಗಿದೆ.

**<><*<><>*><>**

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಗಣಪತಿ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಅಂಬಾವಿಲಾಸ ಅರಮನೆ ಆವರಣದಲ್ಲಿ ವಿಶ್ವ ವಿಖ್ಯಾತ ನಾಡಹಬ್ಬ ಜಂಬೂ ಸವಾರಿಯಲ್ಲಿ ಚಿನ್ನದ ಅಂಬಾರಿ ಹೊರುವ ಅಭಿಮನ್ಯು ಸೇರಿದಂತೆ ಎಲ್ಲಾ ಆನೆಗಳಿಗೂ ಸಂಪ್ರದಾಯ ಬದ್ಧವಾಗಿ ವಿಶೇಷ ಪೂಜೆ ಸಲ್ಲಿಸಲಾಯಿತು. ಮೈಸೂರು ವಲಯದ ವನ್ಯಜೀವಿ ವಿಭಾಗದ ಮುಖ್ಯ ಅರಣ್ಯ ಸಂರಕ್ಷಣಧಿಕಾರಿ ಡಾ ಮಾಲತಿ ಪ್ರಿಯ ಮಾತನಾಡಿ,  ಪ್ರತಿವರ್ಷದಂತೆ ಈ ವರ್ಷವು ಆನೆಗಳಿಗೆ ವಿಶೇಷ ಪೂಜೆ ಸಲ್ಲಿಸಲಾಗಿದೆ. ಪ್ರತಿದಿನ ಮುಂಜಾನೆ ಹಾಗೂ ಸಂಜೆ ಎರಡು ಬಾರಿ ಜಂಬೂ ಸವಾರಿ ತೆರಳುವ ಮಾರ್ಗದಲ್ಲಿ ತಾಲಿಮು ನಡೆಸುತ್ತಿದ್ದು ಎಲ್ಲಾ ಆನೆಗಳು ತಾಲೀಮಿಗೆ ಉತ್ತಮ ಸ್ಪಂದನೆ ನೀಡುತ್ತಿವೆ. ಮುಂದಿನ ದಿನಗಳಲ್ಲಿ ಅಭಿಮನ್ಯು ಆನೆಯೊಂದಿಗೆ ಇತರೆ ಆನೆಗಳಿಗೂ ಭಾರ ಹೊರಿಸುವ ತಾಲಿಮು ನಡೆಸಲಾಗುವುದು. ಅರ್ಜುನ ಆನೆಯ ನಂತರ ನಿಶಾನೆ ಆನೆಯ ಬಗ್ಗೆ ಮುಂದಿನ ದಿನಗಳಲ್ಲಿ ಚರ್ಚಿಸಿ ನಿರ್ಧರಿಸಲಾಗುವುದು ಎಂದು ಹೇಳಿದರು.

**<><*<><>*><>**

ನೇಮಕಾತಿ ಹಾಗೂ ಸಾಮಗ್ರಿ ಖರೀದಿ ಸೇರಿದಂತೆ ಯಾವುದೇ ವಿಷಯದಲ್ಲಿ ಅವ್ಯವಹಾರಕ್ಕೆ ಅವಕಾಶವಿಲ್ಲದ ಹಾಗೆ ಆಡಳಿತ ನಡೆಸುವ ಮೂಲಕ ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯು ಮಾದರಿಯಾಗಬೇಕು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸಭಾಂಗಣದಲ್ಲಿ ನಡೆದ ಸಭೆಯ ಬಳಿಕ ಮಾತನಾಡಿದ ಅವರು, ಈಗಾಗಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡು ಚಾಲ್ತಿಯಲ್ಲಿರುವ ಕಾಮಗಾರಿಗಳು

ಗುಣಮಟ್ಟದ ರೀತಿಯಲ್ಲಿ ನಡೆಯಬೇಕು. ಗುಣಮಟ್ಟದ ವಿಷಯದಲ್ಲಿ ಯಾವುದೇ ರಾಜಿ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಕಳಪೆ ಕಾಮಗಾರಿಯಾಗಿದ್ದರೆ ಗುತ್ತಿಗೆದಾರರಿಗೆ ನೊಟೀಸ್ ಜಾರಿ ಮಾಡಿ. ಗುಣಮಟ್ಟದ ಬಗ್ಗೆ ಪರಿಶೀಲಿಸುವಂತೆ ಎಂದು ಸೂಚಿಸಿದ್ದಾರೆ. ಕೊಪ್ಪಳ ವೈದ್ಯಕೀಯ ಸಂಸ್ಥೆಯ ಹೆಸರಿಗೆ ಮಸಿ ಬಳಿದರೆ ಅಂತವರ ವಿರುದ್ಧ ಮುಲಾಜಿಲ್ಲದೇ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><*<><>*><>

ರಾಜ್ಯದಲ್ಲಿಯೇ ಅತಿ ಹೆಚ್ಚು ವಿವಿಧ ರೀತಿಯ ಹೂ ಬೆಳೆಯುವ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹೂ ಬೆಳೆಗಾರರಿಗೆ ರಾಜ್ಯ ಸರ್ಕಾರ ಹಬ್ಬದ ಸಂಭ್ರಮದಲ್ಲಿ ಸಿಹಿ ಸುದ್ದಿ ನೀಡಿದೆ. ಚಿಕ್ಕಬಳ್ಳಾಪುರ ತಾಲೂಕು ನಂದಿ ಹೋಬಳಿ ಯಲುವಳ್ಳಿ ಬಳಿಯಿರುವ ತೋಟಗಾರಿಕೆ ಇಲಾಖೆಗೆ ಸೇರಿದ ೧೦ ಎಕರೆ ಭೂಮಿಯನ್ನು ಜಿಲ್ಲಾ ಕೇಂದ್ರದಲ್ಲಿ ಬೃಹತ್ ಹೂವಿನ ಮಾರುಕಟ್ಟೆ ನಿರ್ಮಿಸಲು ಮಂಜೂರು ಮಾಡಿ ಗೌರಿಗಣೇಶ ಹಬ್ಬದ ಪ್ರಯುಕ್ತ ಕೊಡುಗೆಯಾಗಿ ನೀಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಜಿಲ್ಲೆಯ ಪುಷ್ಪೋದ್ಯಮಕ್ಕೆ ಮತ್ತಷ್ಟು ಬಲ ತುಂಬಿ ಉತ್ತೇಜಿಸುವ ದೃಷ್ಟಿಯಿಂದ ಚಿಕ್ಕಬಳ್ಳಾಪುರ ಎಪಿಎಂಸಿ ಕಾರ್ಯದರ್ಶಿ ಹೆಸರಿಗೆ ಜಮೀನನ್ನು ಮಂಜೂರು ಮಾಡಿದೆ.

<><*<><>*><>

ಮಂಡ್ಯ ಜಿಲ್ಲೆಯಲ್ಲಿ ನಡೆಯುತ್ತಿದ್ದ ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಂಡ್ಯ ಜಿಲ್ಲಾ ಪೊಲೀಸರು ಮತ್ತೆ ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ. ಈಗಾಗಲೇ ಪ್ರಕರಣಕ್ಕೆ ಸಂಬಂಧಿಸಿದಂತೆ ೭೧ ಮಂದಿ ಆರೋಪಿಗಳನ್ನು ಬಂಧಿಸಲಾಗಿದೆ. ಬಂಧಿತರಿಂದ ಸ್ಕ್ಯಾನಿಂಗ್ ಗೆ ಬಳಸುತ್ತಿದ್ದ ಸಲಕರಣೆಗಳನ್ನು ವಶಕ್ಕೆ ಪಡೆಯಲಾಗಿದೆ. ಜೊತೆಗೆ ಆರೋಪಿಗಳನ್ನು ಇಂದು ನ್ಯಾಯಾಧೀಶರ ಮುಂದೆ ಹಾಜರುಪಡಿಸಿ ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ ಎಂದು ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ತಿಳಿಸಿದ್ದಾರೆ.

<><*<><>*><>

ಬಿರು ಬಿಸಿಲ ಜಿಲ್ಲೆ ಬಳ್ಳಾರಿ ಜಿಲ್ಲೆಯಲ್ಲಿ ಪ್ರಕೃತಿಯ ಸಂಪನ್ಮೂಲಗಳ ಬಳಕೆಗೆ ಪೂರಕವಾದ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಪ್ರಧಾನ ಮಂತ್ರಿ ಸೂರ್ಯ ಘರ್ ಯೋಜನೆಯ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ದೇಶದ ಪ್ರತಿಮನೆಯೂ ಅಗತ್ಯವಿರುವ ವಿದ್ಯುತ್ ಉತ್ಪಾದಿಸಲು ಆದ್ಯತೆ ನೀಡುವುದರ ಜತೆಗೆ ಪರಿಸರ ಮಾಲಿನ್ಯತಡೆ ಹಾಗೂ ಪರಿಸರ ಉಳಿವಿಗಾಗಿ ಪ್ರಾಕೃತಿಕ ಸಂಪನ್ಮೂಲಗಳನ್ನು ಬಳಸಿಕೊಳ್ಳುವ ಉದ್ದೇಶದಿಂದ ಕೇಂದ್ರ ಸರ್ಕಾರ ಸೂರ್ಯಘರ್ ಯೋಜನೆ ಜಾರಿಗೆ ತಂದಿದೆ. ಬಳ್ಳಾರಿಯಲ್ಲಿ ಮನೆಯ ಮೇಲ್ಛಾವಣಿಯಲ್ಲಿ ಸೂರ್ಯ ಘರ್ ಯೋಜನೆಯಡಿ ಸೂರ್ಯನಿಂದ ನೇರವಾಗಿ ಸೌರ ಫಲಕಗಳ ಮುಖಾಂತರ ಮನೆಗೆ ಅಗತ್ಯವಿರುವಷ್ಟು ವಿದ್ಯುತ್ ಪಡೆಯುತ್ತಿದ್ದಾರೆ. ಕೇಂದ್ರ ಸರ್ಕಾರದಿಂದ ರಿಯಾಯಿತಿ ಪಡೆಯುವ ಮೂಲಕ ತಮ್ಮ ಮನೆಗೆ ಬೇಕಾದ ವಿದ್ಯುತ್ ಅನ್ನು ತಾವೇ ಸೋಲಾರ್ ಗಳ ಮೂಲಕ ಬಳಕೆ ಮಾಡಿಕೊಳ್ಳುತ್ತಿದ್ದಾರೆ.

**<><*<><>*><>**

ಕೃ? ನದಿಯ ಪ್ರವಾಹದಿಂದ ಹಾನಿಗೊಳಗಾದ ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ಹೈಯಾಳ(ಬಿ), ಐಕೂರ, ಯಕ್ಷಿಂತಿ, ಹಾಗೂ ಇನ್ನಿತರ ಗ್ರಾಮಗಳಿಗೆ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಭೇಟಿ ನೀಡಿ ಬೆಳೆ ಹಾನಿ ವೀಕ್ಷಿಸಿದರು. ನಂತರ ಮಾತನಾಡಿದ ಅವರು, ಬೆಳೆಹಾನಿಗೊಳಗಾದ ರೈತರು ಯಾವುದೇ ರೀತಿಯ ಆತಂಕ ಪಡುವ ಅಗತ್ಯವಿಲ್ಲ ಎಂದು ಹೇಳಿದರು. ಕಂದಾಯ ಇಲಾಖೆಯ ಸಿಬ್ಬಂದಿ ನದಿ ನೀರಿನಿಂದ ಹಾನಿಗೊಳಗಾದ ರೈತರ ಜಮೀನಿನ ಸರ್ವೆ ಮಾಡಿ ಸಂಪೂರ್ಣವಾದ ಮಾಹಿತಿಯನ್ನು ಜಿಲ್ಲಾಡಳಿತಕ್ಕೆ ಸಲ್ಲಿಸಿದ್ದಾರೆ. ತ್ವರಿತಗತಿಯಲ್ಲಿ ರೈತರಿಗೆ ಬೆಳೆ ಹಾನಿ ಪರಿಹಾರ ನೀಡಲಾಗುವುದು ಎಂದು ಭರವಸೆ ನೀಡಿದರು. ಕೆಲವು ದಿನಗಳಿಂದ ಹತ್ತಿ ಬೆಳೆಗೆ ವಿಚಿತ್ರವಾದ ರೋಗ ಹರಡಿರುವುದನ್ನು ರೈತರು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದಿದ್ದಾರೆ. ನಂತರ ಸ್ಥಳದಲ್ಲಿಯೇ ಇದ್ದ ಕೃಷಿ ಅಧಿಕಾರಿಗಳಿಗಳಿಗೆ ಈ ರೋಗದ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸಿ ರೈತರಿಗೆ ಸಲಹೆ ನೀಡುವಂತೆ ಸೂಚನೆ ನೀಡಿದ್ದಾರೆ.

**<><*<><>*><>**

ರೈತರಿಗೆ ಕಾಲುವೆಗಳ ಮೂಲಕ ಸಮರ್ಪಕ ನೀರು ಒದಗಿಸಲು ಸರ್ಕಾರ ಹಲವು ಕ್ರಮ ಕೈಗೊಂಡಿದ್ದು ಅದರ ನಿರ್ವಹಣೆ ಕುರಿತು ವಿದೇಶಿ ತಂತ್ರಜ್ಞಾನ ಅಳವಡಿಸಲು ಮುಂದಾಗಿದೆ. ಈ ನಿಟ್ಟಿನಲ್ಲಿ ಫ್ರಾನ್ಸ್ ನೀರಾವರಿ ತಜ್ಞ ಡಿ.ರೆನಾಲ್ಟ್ ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಎಡದಂಡೆ ಕಾಲುವೆಯ ಹಲವು ಉಪ ಕಾಲುವೆಗಳಿಗೆ ಭೇಟಿ ನೀಡಿ ಪರಿಸ್ಥಿತಿ ಅವಲೋಕನ ಮಾಡಿದರು. ನೂತನ ಸ್ಕಾಡಾ ತಂತ್ರಜ್ಞಾನ ಮೂಲಕ ಉಪಕಾಲುವೆಗಳಿಗೆ ನೀರು ಹರಿಸಿ ರೈತರಿಗೆ ಸಮರ್ಪಕ ನೀರು ತರುವಲ್ಲಿ ಅಧಿಕಾರಿಗಳು ಸ್ವಲ್ಪ ಮಟ್ಟಿಗೆ ಯಶಸ್ಸು ಕಂಡಿದ್ದಾರೆ. ಈಗ ಸ್ಕಾಡಾ ತಂತ್ರಜ್ಞಾದ ಬಳಕೆ ಮತ್ತು ಅವುಗಳ ನಿರ್ವಹಣೆ, ಕಾಲುವೆಯ ಕೊನೆಯ ಭಾಗದ ರೈತರಿಗೂ ನೀರು ಹರಿಸುವುದು, ಸ್ಕಾಡಾರಹಿತ ಪ್ರದೇಶದಲ್ಲೂ ರೈತರಿಗೆ ನೀರು ಒದಗಿಸುವುದು ಸೇರಿದಂತೆ ಹಲವು ಕ್ರಮಗಳ ಕುರಿತು ರೇನಾಲ್ಟ್ ಅವರು ಖುದ್ದು ಉಪ ಕಾಲುವೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮುಂಬರುವ ದಿನಗಳಲ್ಲಿ ಫ್ರಾನ್ಸ್ ದೇಶದ ತಂತ್ರಜ್ಞಾನ ಇಲ್ಲಿ ಅಳವಡಿಸುವ ಕುರಿತು ಚಿಂತನೆ ನಡೆಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

**<><*<><>*><>**

ನೈಋತ್ಯ ಮಾನ್ಸೂನ್ ಕರಾವಳಿ ಕರ್ನಾಟಕದಲ್ಲಿ ಸಾಮಾನ್ಯವಾಗಿತ್ತು. ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿ ಕರ್ನಾಟಕದ ಹೆಚ್ಚಿನ ಸ್ಥಳಗಳಲ್ಲಿ ಮತ್ತು ಒಳನಾಡಿನ ಹಲವೆಡೆ ಮಳೆಯಾಗಿದೆ. ಗೋಕರ್ಣ ಮಾಣಿ, ಪುತ್ತೂರು ಕಾರ್ಕಳದಲ್ಲಿ ತಲಾ ೪ ಸೆಂಟಿಮೀಟರ್ ಮಳೆಯಾಗಿದೆ. ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಚಿಕ್ಕಮಗಳೂರು ಬೀದರ್ ಕಲಬುರ್ಗಿ, ರಾಯಚೂರಿನಲ್ಲೂ ಹಗುರದಿಂದ ಸಾಧಾರಣವಾಗಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣವಿದ್ದು ಹಗುರದಿಂದ ಸಾಧರಣಾ ಮಳೆಯಾಗುವ ಸಾಧ್ಯತೆ ಇದೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಕನಕಪುರ ತಾಲ್ಲೂಕಿನ ಹಾರೋಬೆಲೆಯ ಮೂಲೆಗುಂದಿಯಲ್ಲಿ ನಿರ್ಮಿಸಲಾಗಿರುವ ಅರ್ಕಾವತಿ ಜಲಾಶಯ ಬಲದಂಡೆ ಏತ ನೀರಾವರಿ ಯೋಜನೆಯ ಪರಿಕ್ಷಾರ್ಥ ಕಾಮಗಾರಿಗೆ ಚಾಲನೆ ನೀಡಿದರು.

೨. ಶಾಲೆಯಲ್ಲಿ ಸಿ ಮತ್ತು ಡಿ ವಿಭಾಗಗಳ ವಿದ್ಯಾರ್ಥಿಗಳನ್ನು ಗುರುತಿಸಿ ಅವರ ಮೇಲೆ ಹೆಚ್ಚು ಗಮನ ಹರಿಸಬೇಕು ಎಂದು ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಮುಖ್ಯ ಶಿಕ್ಷಕರಿಗೆ ಸೂಚನೆ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**